# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ವಾಹಿದ್ ಬಿನ್ ಅಹ್ಮದ್ ಸಾಬ್ ಸದಸ್ಯರು, ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ, ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ)ರಡಿ ಕ್ರಮ ಜರುಗಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018 ದಿನಾಂಕ:02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಶಿವಮೊಗ್ಗ ಜಿಲ್ಲೆ ಇವರ ಪತ್ರ ಸಂಖ್ಯೆ:ಜಿಪಂ:ಶಿ:ಯೋಶಾ /ಸಭಾ/2019-20, ದಿನಾಂಕ:08.07.2019.
3. ಸರ್ಕಾರದ ಪತ್ರ ಸಂಖ್ಯೆ:ಗ್ರಾಅಪ 687 ಗ್ರಾಪಂಅ 2019 ದಿನಾಂಕ:04.09.2019.
4. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, ಇವರ ಪತ್ರ ಹಾಗೂ ವಿಚಾರಣಾ ವರದಿ ಸಂಖ್ಯೆ:ಪ್ರಾಆಕ/ಅಭಿವೃದ್ಧಿ/ಸಿಆರ್/52/2019-20, ದಿನಾಂಕ:09.12.2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರಡಿ ಗ್ರಾಮ ಪಂಚಾಯಿತಿ ಸದಸ್ಯರುಗಳು, ಪ್ರಕರಣ 48(4) ಮತ್ತು 48(5) ರಡಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಮೇಲೆ ದುರ್ವರ್ತನೆ, ಅಧಿಕಾರ ಮತ್ತು ಹಣ ದುರುಪಯೋಗಕ್ಕಾಗಿ ಕ್ರಮಕೈಗೊಳ್ಳುವ ಸಲುವಾಗಿ ವಿಚಾರಣೆ ನಡೆಸುವ ಅಧಿಕಾರವನ್ನು ಪ್ರಾದೇಶಿಕ ಆಯುಕ್ತರುಗಳಿಗೆ ವಹಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಶಿವಮೊಗ್ಗ ಇವರು ಶ್ರೀ ವಾಹಿದ್ ಬಿನ್ ಅಹ್ಮದ್‌ಸಾಬ್ ಇವರು ನವೆಂಬರ್-2018 ರಿಂದ ಮಾರ್ಚ್-2019ರವರೆಗೆ ನಡೆದ ಗ್ರಾಮ ಪಂಚಾಯತಿಯ 04 ಸಾಮಾನ್ಯ ಸಭೆಗಳಿಗೆ ಅನುಮತಿ ಪಡೆಯದೇ ಸತತವಾಗಿ ಗೈರು ಹಾಜರಾಗಿದ್ದು ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(ಎ)(iii) ಹಾಗೂ ಪಂಚಾಯತ್ ನಿಯಮ 13(ಸಿ) ಪ್ರಕಾರ ಅವರ ಸದಸ್ಯತ್ವವನ್ನು ರದ್ದುಪಡಿಸಲು ಸರ್ಕಾರಕ್ಕೆ ಸಲ್ಲಿಸಿದ್ದು, ಆದರಂತೆ ಮೇಲೆ ಓದಲಾದ ಕ್ರಮಾಂಕ (3)ರಲ್ಲಿ ಸದರಿ ಪ್ರಕರಣದ ವಿಚಾರಣೆಯನ್ನು ಜರುಗಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ತಿಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು ಇವರು ದಿನಾಂಕ:03.10.2019ರಂದು ಸದರಿಯವರಿಗೆ ನೀಡಿರುವ ಕಾರಣ ಕೇಳಿ ನೋಟೀಸ್‌ಗೆ ಅವರು ದಿನಾಂಕ:25.10.2019ರಂದು ನೀಡಿರುವ ಲಿಖಿತ ಸಮಜಾಯಿಷಿಯಲ್ಲಿ ಅನಾರೋಗ್ಯದ ನಿಮಿತ್ತ ಸತತವಾಗಿ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ ಹಾಜರಾಗಲು ಸಾಧ್ಯವಾಗಿರುವುದಿಲ್ಲ. ಇನ್ನು ಮುಂದೆ ಎಲ್ಲಾ ಸಭೆಗೆ ಹಾಜರಾಗುವುದಾಗಿ ತಿಳಿಸಿ, ಆಸ್ಪತ್ರೆಯಲ್ಲಿ ವೈದ್ಯರು ನೀಡಿರುವ ದಾಖಲಾತಿಗಳ ಪ್ರತಿಗಳನ್ನು ಸಲ್ಲಿಸಿರುತ್ತಾರೆ. ಸದರಿಯವರು ದಿನಾಂಕ:29.11.2018, 05.01.2019, 12.02.2019 ಹಾಗೂ 06.03.2019ರ ಸಾಮಾನ್ಯ ಸಭೆಗಳಿಗೆ ಹಾಗೂ ನಂತರದಲ್ಲಿ ನಡೆದ ಯಾವುದೇ ಸಾಮಾನ್ಯ ಸಭೆಗಳಿಗೆ ಹಾಜರಾಗಲು ನೋಟೀಸುಗಳನ್ನು ಹಾಗೂ ತಿಳುವಳಿಕೆ ಪತ್ರವನ್ನು ಸದರಿ ಸದಸ್ಯರು ಲಭ್ಯವಿಲ್ಲದ ಕಾರಣ ಅವರ ಪತ್ನಿ, ಅವರ ತಮ್ಮನವರಿಗೆ ನೀಡಲಾಗಿರುತ್ತದೆ.

ನಂತರದಲ್ಲಿ ಸದರಿಯವರು ಊರಿನಲ್ಲಿ ಲಭ್ಯವಿಲ್ಲದೇ ಇರುವುದರಿಂದ ನೋಟೀಸನ್ನು ನೀಡಲು ಸಾಧ್ಯವಿರುವುದಿಲ್ಲ ಅವರು ತಲೆಮರೆಸಿಕೊಂಡಿರುವ ಬಗ್ಗೆ ದಿನಾಂಕ:11.01.2019ರಂದು ಸ್ಥಳೀಯ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್‌ರವರು ನ್ಯಾಯಾಲಯದ ಪ್ರಕರಣಗಳಿಗೆ ಸಂಬಂಧಿಸಿದಂತೆ ಇವರ ಮೇಲೆ ಹೊಸನಗರ ತಾಲ್ಲೂಕಿನ ಸಿ.ಜೆ ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ಸಿ.ಸಿ ನಂ2018/2017, 20/2017, 20/2017,606/2017 ಮತ್ತು 435/325ನಂಬರಿನ ಕಲಂ 138ಎನ್ ಐ ಆಕ್ಟ್ ಪ್ರಕರಣಗಳಲ್ಲಿ ದಸ್ತಗಿರಿ ವಾರೆಂಟ್ ಆದೇಶವಾಗಿದ್ದು ಆರೋಪಿ ತಲೆಮರೆಸಿಕೊಂಡಿರುವ ಬಗ್ಗೆ ವರದಿ ಮಾಡಿರುವ ಬಗ್ಗೆ ವರದಿಯನ್ನು ಕೇಳಿರುವುದಾಗಿ ತಿಳಿಸಿರುತ್ತಾರೆ.

ಶ್ರೀ ವಾಹಿದ್ ಬಿನ್ ಅಹ್ಮದ್ ಸಾಬ್, ಸದಸ್ಯರು ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ, ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರಿಗೆ ದಿನಾಂಕ:18.11.2019ರಂದು ವಿಚಾರಣೆಗೆ ಹಾಜರಾಗುವಂತೆ ನೋಟೀಸು ನೀಡಲಾಗಿರುತ್ತದೆ. ಆದರೆ ನೋಟೀಸ್ ಜಾರಿಯಾದರೂ ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಈ ಹಿನ್ನೆಲೆಯಲ್ಲಿ 04 ಸಾಮಾನ್ಯ ಸಭೆಗಳಿಗೆ ಯಾವುದೇ ಅನುಮತಿ ಪಡೆಯದೇ ಸತತವಾಗಿ ಗೈರು ಹಾಜರಾಗಿರುವ ಕುರಿತು ಸದರಿಯವರು ನೀಡಿರುವ ವರದಿಯನ್ನು ಪರಿಶೀಲಿಸಲಾಗಿ, ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ವಾಹಿದ್ ಬಿನ್ ಅಹ್ಮದ್ ಸಾಬ್ ಇವರು ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರು ಹಾಜರಾಗಿರುವುದಲ್ಲದೆ ಪ್ರಕರಣದ ವಿಚಾರಣೆಗೂ ಸಹ ಹಾಜರಾಗಿರುವುದಿಲ್ಲ. ಅಲ್ಲದೆ, ದಿನಾಂಕ:11.01.2019ರ ಪತ್ರದಲ್ಲಿ ರಿಪ್ಪನ್‌ಪೇಟೆ ಪೊಲೀಸ್ ಠಾಣೆಯಲ್ಲಿ ಶ್ರೀ ವಾಹಿದ್ ಬಿನ್ ಮಹ್ಮದ್‌ಸಾಬ್ ತಲೆಮರೆಸಿಕೊಂಡಿರುವ ಬಗ್ಗೆ ರಿಪ್ಪನ್ ಪೇಟೆ ಪೋಲೀಸ್ ಇನ್ಸ್‌ಪೆಕ್ಟರ್ ನೀಡಿರುವ ಪತ್ರದಿಂದ ಕಂಡುಬಂದಿರುತ್ತದೆ.

ಈ ಮೇಲಿನ ಎಲ್ಲಾ ಅಂಶಗಳನ್ನು ಗಮನಿಸಿದಾಗ ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ ಸದಸ್ಯರಾದ ಶ್ರೀ ವಾಹಿದ್ ಬಿನ್ ಅಹ್ಮದ್ ಸಾಬ್ ಇವರು ಗ್ರಾಮ ಪಂಚಾಯತಿಯ ಮೂರಕ್ಕಿಂತ ಹೆಚ್ಚು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದು ದೃಢಪಟ್ಟಿರುತ್ತದೆ. ಆದ ಕಾರಣ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(ಎ)(iii) ಹಾಗೂ ಪಂಚಾಯತ್ ನಿಯಮ 13(ಸಿ) ಪ್ರಕಾರ ಶ್ರೀ ವಾಹೀದ್ ಬಿನ್ ಅಹ್ಮದ್ ಸಾಬ್ ರವರ ಸದಸ್ಯತ್ವವನ್ನು ರದ್ದುಪಡಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಶ್ರೀ ವಾಹಿದ್ ಬಿನ್ ಅಹ್ಮದ್ ಸಾಬ್, ಸದಸ್ಯರು ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ, ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರು ದಿನಾಂಕ:29.11.2018, 05.01.2019, 12.02.2019 ಹಾಗೂ 06.03.2019ರಂದು ಒಟ್ಟು 4 ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದು ಹಾಗೂ ತಲೆಮರೆಸಿಕೊಂಡಿರುವ ಪ್ರಕರಣವು ಹೊಸನಗರ ತಾಲ್ಲೂಕಿನ ಸಿ.ಜೆ ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ಸಿ.ಸಿ ನಂ2018/2017, 20/2017, 20/2017,606/2017 ಮತ್ತು 435/325ನಂಬರಿನ ಕಲಂ 138 ಎನ್ ಐ ಆಕ್ಟ್‌ರಡಿಯಲ್ಲಿ ದಾಖಲಾಗಿರುವುದರಿಂದ ಸರ್ಕಾರವು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(ಎ) ರಡಿ ಸದರಿಯವರ ಸದಸ್ಯತ್ವವನ್ನು ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿರುತ್ತದೆ.

ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 28 ಗ್ರಾಪಂಅ 2020 ಬೆಂಗಳೂರು, ದಿನಾಂಕ:24.02.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ವಾಹಿದ್ ಬಿನ್ ಅಹ್ಮದ್ ಸಾಬ್, ಸದಸ್ಯರು ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ, ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರು ದಿನಾಂಕ:29.11.2018, 05.01.2019, 12.02.2019 ಹಾಗೂ 06.03.2019ರಂದು ಒಟ್ಟು 4 ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿರುವುದು ಹಾಗೂ ತಲೆಮರೆಸಿಕೊಂಡಿರುವ ಪ್ರಕರಣವು ಹೊಸನಗರ ತಾಲ್ಲೂಕಿನ ಸಿ.ಜೆ ಮತ್ತು

ಜೆಎಂಎಫ್‌ಸಿ ನ್ಯಾಯಾಲಯದ ಸಿ.ಸಿ ನಂ2018/2017, 20/2017, 20/2017,606/2017 ಮತ್ತು 435/325ನಂಬರಿನ ಕಲಂ 138 ಎನ್ ಐ ಆಕ್ಟ್ ರಡಿಯಲ್ಲಿ ದಾಖಲಾಗಿರುವುದರಿಂದ ಸದಸ್ಯರು ಸಮರ್ಪಕವಾಗಿ ಜವಾಬ್ದಾರಿಯುತವಾಗಿ ತಮ್ಮ ಕರ್ತವ್ಯಗಳನ್ನು ನಿಭಾಯಿಸದೆ ಇರುವುದು ಸಾಬೀತಾಗಿದೆ. ಆದುದರಿಂದ ಶ್ರೀ ವಾಹಿದ್ ಬಿನ್ ಅಹ್ಮದ್ ಸಾಬ್, ಸದಸ್ಯರು ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ, ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣದ 43(ಎ)ರನ್ವಯ ರಿಪ್ಪನ್ ಪೇಟೆ ಗ್ರಾಮ ಪಂಚಾಯತಿಯ ಸದಸ್ಯತ್ವದಿಂದ ತಕ್ಷಣ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 24/2/2020
(ನವೀನ್ ಕುಮಾರ್. ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹೆಚ್. ರಸ್ತೆ, ಬೆಂಗಳೂರು.
2. ಜಿಲ್ಲಾಧಿಕಾರಿ, ಶಿವಮೊಗ್ಗ ಜಿಲ್ಲೆ, ದಾವಣಗೆರೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಶಿವಮೊಗ್ಗ ಜಿಲ್ಲೆ.
4. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ.
5. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ, ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ.
6. ಶ್ರೀ ವಾಹಿದ್ ಬಿನ್ ಅಹ್ಮದ್ ಸಾಬ್, ಅಂದಿನ ಸದಸ್ಯರು ರಿಪ್ಪನ್‌ಪೇಟೆ ಗ್ರಾಮ ಪಂಚಾಯತಿ, ಹೊಸನಗರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊಸನಗರ, ಶಿವಮೊಗ್ಗ ಜಿಲ್ಲೆ ಇವರ ಮುಖಾಂತರ)**
7. ಗಣಕ ಕೋಶ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.